

ಗೌರಿ ಲಂಕೇಶ್ ಹತ್ಯೆ ಖಂಡಿಸಿ ಪ್ರತಿಭಟನೆ

ದುಷ್ಕರ್ಮಿಗಳ ಬಂಧನಕ್ಕೆ ಪಿಎಫ್ಐ, ಸಿಐಟಿಯು, ಪ್ರಗತಿಪರ ಸಂಘಟನೆಗಳ ಆಗ್ರಹ

ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಖಂಡಿಸಿ ಪಿಎಫ್ಐ ಕಾರ್ಯಕರ್ತರು ಚಾ.ನಗರ ಲಾರಿ ನಿಲ್ದಾಣದಿಂದ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಮಾಡಿದ ದುಷ್ಕರ್ಮಿಗಳನ್ನು ಬಂಧಿಸುವಂತೆ ಆಗ್ರಹಿಸಿ ಸಿಐಟಿಯು ಕಾರ್ಯಕರ್ತರು ಚಾ.ನಗರ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದರು.

ಗೌರಿ ಲಂಕೇಶ್ ಅವರ ಹತ್ಯೆಗೈದ ದುಷ್ಕರ್ಮಿಗಳನ್ನು ಪತ್ತೆ ಹಚ್ಚಿ ಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ದಲಿತ, ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಚಾ.ನಗರದಲ್ಲಿ ಮೊಂಬತ್ತಿ ಮೆರವಣಿಗೆ ನಡೆಸಿದರು.

ಚಾಮರಾಜನಗರ,ಸೆ.೮–ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಖಂಡಿಸಿ ಪಿಎಫ್ಐ, ಸಿಐಟಿಯು ಸಂಘಟನೆಗಳು ನಗರದ ಪ್ರತ್ಯೇಕ ಸ್ಥಳಗಳಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದವು.

ಪಿಎಫ್ಐ: ಗೌರಿ ಲಂಕೇಶ್ ಹತ್ಯೆ ಆರೋಪಿಗಳನ್ನು ಶೀಘ್ರ ಪತ್ತೆಹಚ್ಚಿ ಕಠಿಣ ಶಿಕ್ಷೆ ನೀಡಬೇಕು ಎಂದು ಒತ್ತಾಯಿಸಿ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾದ ಕಾರ್ಯಕರ್ತರು ಲಾರಿ ನಿಲ್ದಾಣದಿಂದ ಪ್ರತಿಭಟನಾ ಮೆರವಣಿಗೆ ನಡೆಸಿದರು.

ನಗರಸಭಾ ಸದಸ್ಯ ಸೈಯದ್‌ಆರೀಫ್, ಪಿಎಫ್ಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಫೀ ಉಲ್ಲಾಖಾನ್, ಪದಾಧಿಕಾರಿಗಳಾದ ಅಜೀಂ, ಅಫ್ಜಲ್ ಷರೀಫ್, ಆಲ್ ಇಂಡಿಯಾ ಇಮಾಮ್ ಕೌನ್ಸಿಲ್ ಸದಸ್ಯ ಮಹಮದ್ ಜಾವಿದ್, ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಅಬ್ರಾರ್ ಅಹಮದ್, ಉಪಾಧ್ಯಕ್ಷ ಸಮೀವುಲ್ಲಾ ಖಾನ್, ಕಾರ್ಯದರ್ಶಿ ಜಬಿನೂರ್, ಕ್ಯಾಂಪಸ್ ಫ್ರಂಟ್ ಆಫ್ ಇಂಡಿಯಾ ಅಧ್ಯಕ್ಷ ಸರ್ದಾರ್ ಷರೀಫ್, ಸುಹೇಬ್, ಜಬಿವುಲ್ಲಾ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಿಐಟಿಯು: ಗೌರಿ ಲಂಕೇಶ್ ಹತ್ಯೆ ಖಂಡಿಸಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ ಕಾರ್ಯಕರ್ತರು ಚಾಮರಾಜೇಶ್ವರ ಉದ್ಯಾನವನದಿಂದ ಜಿಲ್ಲಾಡಳಿತ ಭವನದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಹತ್ಯೆ ಮಾಡಿದ ಕಿಡಿಗೇಡಿಗಳನ್ನು ಕೂಡಲೇ ಪತ್ತೆ ಹಚ್ಚಿ ಕಾನೂನು ರೀತ್ಯಾ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿದ ಅವರು, ಈ ಸಂಬಂಧ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಯೂನಿಯನ್ ಜಿಲ್ಲಾಧ್ಯಕ್ಷ ಸುರೇಶ್, ಪ್ರಧಾನ ಕಾರ್ಯದರ್ಶಿ ಸುಜಾತಾ, ಸಾಹಿರಾ ಬಾನು, ದೇವಮ್ಮ, ಪುಟ್ಟಬಸಮ್ಮ, ಶಿವಮ್ಮ, ಪದ್ಮಾ, ಸುವರ್ಣ, ರಾಜಮ್ಮ, ಶಾರದಾ, ಗೀತಾ, ಚಂದ್ರಣ್ಣ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಮೊಂಬತ್ತಿ ಮೆರವಣಿಗೆ: ಗೌರಿ ಲಂಕೇಶ್ ಅವರ ಹತ್ಯೆ ಪ್ರಕರಣವನ್ನು ವಿಶೇಷ ತನಿಖಾ ತಂಡ ತ್ವರಿತವಾಗಿ ಭೇದಿಸುವ ಮೂಲಕ ದುಷ್ಕರ್ಮಿಗಳನ್ನು ಶಿಕ್ಷೆಗೆ ಗುರಿಪಡಿಸಬೇಕೆಂದು ಒತ್ತಾಯಿಸಿ ದಲಿತ, ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಸಂಜೆ ಮೊಂಬತ್ತಿ ಮೆರವಣಿಗೆ ನಡೆಸಿದರು.

ಚಾಮರಾಜೇಶ್ವರ ಉದ್ಯಾನವನದಿಂದ ಭುವನೇಶ್ವರಿ ವೃತ್ತದವರೆಗೆ ಮೊಂಬತ್ತಿ ಮೆರವಣಿಗೆ ಮಾಡಿದರು. ಇಂತಹ ಪ್ರಕರಣಗಳು ಮರುಕಳಿಸದಂತೆ ಕ್ರಮವಹಿಸಬೇಕು ಎಂದು ಪ್ರಗತಿಪರ ಸಂಘಟನೆಯ ಜಿಲ್ಲಾ ಸಂಚಾಲಕ ಸಿ.ಎಂ.ಕೃಷ್ಣಮೂರ್ತಿ ಒತ್ತಾಯಿಸಿದರು.

ಮುಖಂಡರಾದ ಅರಕಲವಾಡಿ ನಾಗೇಂದ್ರ, ಅಬ್ರಾರ್ ಅಹಮದ್, ಸಮೀವುಲ್ಲಾ, ರಾಮಸಮುದ್ರ ಸುರೇಶ್, ಕಣ್ಣೇಗಾಲ ಮಹದೇವನಾಯ್ಕ, ನಿಜಧ್ವನಿ ಗೋವಿಂದರಾಜು, ಬಿಸಲವಾಡಿ ಸೋಮಶೇಖರ್, ಹೊನ್ನೂರು ಪ್ರಕಾಶ್, ಅಂಬರೀಶ್, ಬ್ಯಾಡಮೂಡ್ಲು ಬಸವಣ್ಣ, ಸೈಯದ್ ಆರೀಫ್, ಆಲೂರು ನಾಗೇಂದ್ರ, ಜಗದೀಶ್ ಇನ್ನಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕೈಮಗ್ಗ ನೇಕಾರರಿಗೆ ಕಿಟ್ ವಿತರಣೆ

ಚಾಮರಾಜನಗರ,ಸೆ.೮–ಕೈಮಗ್ಗ ಮತ್ತು ಜವಳಿ ಇಲಾಖೆ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ ಕೈಮಗ್ಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೇಕಾರರಿಗೆ ಕೈಮಗ್ಗ ವಿನ್ಯಾಸಗಳ ಉನ್ನತೀಕರಣಕ್ಕಾಗಿ ವಿವಿಧ ಜಕಾರ್ಡ್ ಕಿಟ್‌ಗಳನ್ನು ಒದಗಿಸಲಿದೆ.

ಶೇ.೫೦ರ ಸಹಾಯಧನದಲ್ಲಿ ಸಾಮಾನ್ಯ ವರ್ಗದವರಿಗೆ ಹಾಗೂ ಶೇ.೯೦ರ ಸಹಾಯ ಧನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಎಲೆಕ್ಟ್ರಾನಿಕ್ ಜಕಾರ್ಡ್, ನ್ಯೂಮ್ಯಾಟಿಕ್ ಜಕಾರ್ಡ್ ಹಾಗೂ ಮೋಟರೈಸ್ಡ್ ಜಕಾರ್ಡ್ ಕಿಟ್‌ಗಳನ್ನು ಒದಗಿಸಲಾಗುವುದು. ಹಾಲಿ ಕೈಮಗ್ಗ ವೃತ್ತಿಯಲ್ಲಿರುವ ನೇಕಾರರು ಕೈಮಗ್ಗ ವೃತ್ತಿಯಲ್ಲಿ ತೊಡಗಿಕೊಂಡಿರುವ ಬಗ್ಗೆ ಸೂಕ್ತ ದಾಖಲಾತಿಗಳನ್ನು ಒದಗಿಸಿ ಅರ್ಜಿಗಳನ್ನು ಕಚೇರಿಯಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರ ಕಚೇರಿ (೦೮೨೨೬–೨೨೨೮೮೩)ಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ವಿವಿಧ ತರಬೇತಿಗೆ ಅರ್ಜಿ ಆಹ್ವಾನ

ಚಾಮರಾಜನಗರ,ಸೆ.೮–ಯಳಂದೂರು ಪಟ್ಟಣ ಪಂಚಾಯಿತಿಯು ೨೦೧೭–೧೮ನೇ ಸಾಲಿಗೆ ದೀನ ದಯಾಳ್ ಅಂತ್ಯೋದಯ ಯೋಜನೆ ನಲ್ಮ್ ಅಭಿಯಾನದ ಉಪಯೋಜನೆಗಳಾದ ಇಎಸ್‌ಟಿ ಅಂಡ್ ಪಿ ಮತ್ತು ಎಸ್‌ಇಪಿ ಕಾರ್ಯಕ್ರಮಗಳಡಿ ಲಘು ವಾಹನ ಚಾಲನಾ ತರಬೇತಿ, ಟೈಲರಿಂಗ್ ತರಬೇತಿ ಹಾಗೂ ಸ್ವಯಂ ಉದ್ಯೋಗದಡಿ ಸಣ್ಣ ಉದ್ದಿಮೆ ಸ್ಥಾಪಿಸಲು ಸಹಾಯಧನದೊಂದಿಗೆ ಸಾಲ ಸೌಲಭ್ಯ ಕಲ್ಪಿಸಿಕೊಡಲಿದೆ.

ಅರ್ಜಿಯನ್ನು ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಪಡೆದು ದಾಖಲಾತಿಗಳೊಂದಿಗೆ ಸೆ.೧೫ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಕಚೇರಿಯ ಸಮುದಾಯ ಸಂಘಟಕರನ್ನು ಸಂಪರ್ಕಿಸುವಂತೆ ಮುಖ್ಯಾಧಿಕಾರಿ ಎಸ್.ಉಮಾಶಂಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನದಿ ಜೋಡಣೆಯಿಂದ ನೀರಿನ ಸಮಸ್ಯೆ ನಿವಾರಣೆ

ಕೊಳ್ಳೇಗಾಲದಲ್ಲಿ ನದಿ ಉಳಿಸಿ ಜಾಗೃತಿ ಜಾಥಾದಲ್ಲಿ ವೈದ್ಯ ಎಸ್.ಶಿವರುದ್ರಸ್ವಾಮಿ ಹೇಳಿಕೆ

ಕೊಳ್ಳೇಗಾಲ,ಸೆ.೮–ನದಿಗಳ ಜೋಡಣೆಯಿಂದ ಮಾತ್ರ ನೀರಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದು ಹಿರಿಯ ವೈದ್ಯ ಎಸ್.ಶಿವರುದ್ರಸ್ವಾಮಿ ತಿಳಿಸಿದರು.

ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ಶುಕ್ರವಾರ ಜೆಎಸ್‌ಬಿ ಪ್ರತಿಷ್ಠಾನ, ರೋಟರಿ ಸಂಸ್ಥೆ, ಭಾರತ ವಿಕಾಸ ಪರಿಷದ್ ನಿಜಗುಣ ಶಾಖೆ, ವಿವೇಕಾನಂದ, ಗುರುಕುಲ, ಮಹದೇಶ್ವರ ಐಟಿಐ ಕಾಲೇಜುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ನದಿ ಉಳಿಸಿ ಜಾಗೃತಿ ಜಾಥಾ ಅಂಗವಾಗಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಮುಂದೊಂದು ದಿನ ವಿಶ್ವದಲ್ಲಿ ಯುದ್ಧ ಸಂಭವಿಸಿದರೆ ಅದು ನೀರಿಗಾಗಿಯೇ ಆಗಿರುತ್ತದೆ. ಸಾರ್ವಜನಿಕರು ನೀರನ್ನು ಹಿತಮಿತವಾಗಿ ಬಳಸಬೇಕು. ಪ್ರತಿಯೊಬ್ಬರೂ ಜಲ ಮೂಲಗಳನ್ನು ಸಂರಕ್ಷಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಅವರು ಹೇಳಿದರು.

ಕೊಳ್ಳೇಗಾಲ ತಾಲ್ಲೂಕು ಕಚೇರಿ ಆವರಣದಲ್ಲಿ ನದಿಗಾಗಿ ರ್‍ಯಾಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಂದರ್ಭ. ಡಾ.ಎಸ್.ಶಿವರುದ್ರಸ್ವಾಮಿ, ಶಶಿಕುಮಾರ್, ಶಾಂತರಾಜು, ಕುಮಾರಸ್ವಾಮಿ ಇತರರು ಚಿತ್ರದಲ್ಲಿದ್ದಾರೆ.

ಜೆಎಸ್‌ಬಿ ಪ್ರತಿಷ್ಠಾನ ಅಧ್ಯಕ್ಷ ಶಶಿಕುಮಾರ್ ಮಾತನಾಡಿದರು. ನಗರಸಭೆ ಅಧ್ಯಕ್ಷ ಶಾಂತರಾಜು, ರೋಟರಿ ಸಂಸ್ಥೆ ಅಧ್ಯಕ್ಷ ಕುಮಾರಸ್ವಾಮಿ, ಕೆ.ಎಸ್.ಜಗದೀಶ್, ಜೋಸೆಫ್ ಫೆರ್ನಾಂಡಿಸ್, ಜೋನಲ್ ಲೆಫ್ಟಿನೆಂಟ್ ಪಿ.ಈಶ್ವರ್, ಭಾರತ ವಿಕಾಸ್ ಪರಿಷದ್ ನಿಜಗುಣ ಶಾಖೆ ಉಪಾಧ್ಯಕ್ಷ ಪ್ರಕಾಶ್‌ಮೂರ್ತಿ, ಮಹದೇವ ಸ್ವಾಮಿ, ಬಿ.ಕೆ.ಪ್ರಕಾಶ್, ಬಸವ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೀರಭದ್ರಸ್ವಾಮಿ, ವಿವೇಕಾನಂದ ಐಟಿಐ ಕಾರ್ಯದರ್ಶಿ ರಾಜೇಶ್, ಗುರುಕುಲ ಐಟಿಐ ಪ್ರಾಂಶುಪಾಲ ಮಹದೇವ ಪ್ರಸಾದ್, ಮುಖಂಡರಾದ ಸಂದೀಪ್, ರಾಜಣ್ಣ, ರವಿ, ನಾಗರಾಜು, ಶಿವಕುಮಾರ್, ಮಧು, ಅಭಿಲಾಷ್, ನಂದೀಶ್, ಪ್ರವೀಣ್, ರಂಜಿತ್, ಪ್ರಸಾದ್, ಕೀರ್ತಿ ಚಾಂದ್ ಪಾಷ ಹಾಜರಿದ್ದರು.

‘ಮಕ್ಕಳನ್ನು ಬಾಲ್ಯವಿವಾಹಕ್ಕೆ ದೂಡಬೇಡಿ’

ಚಿಕ್ಕಾಟಿಯಲ್ಲಿ ಕನಕಭವನ ಉದ್ಘಾಟಿಸಿ ಸಚಿವೆ ಡಾ.ಗೀತಾ

ಗುಂಡ್ಲುಪೇಟೆ,ಸೆ.೮–ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹ ಮಾಡದೇ ಅವರ ಶೈಕ್ಷಣಿಕ ಅಭಿವೃದ್ಧಿಗೆ ಪೋಷಕರು ಹೆಚ್ಚಿನ ಕಾಳಜಿ ವಹಿಸಬೇಕೆಂದು ಸಕ್ಕರೆ ಹಾಗೂ ಸಣ್ಣ ಕೈಗಾರಿಕೆ ಸಚಿವರಾದ ಡಾ.ಗೀತಾ ಮಹದೇವಪ್ರಸಾದ್ ಸಲಹೆ ನೀಡಿದರು.

ತಾಲ್ಲೂಕಿನ ಚಿಕ್ಕಾಟಿ ಗ್ರಾಮದಲ್ಲಿ ಶುಕ್ರವಾರ ಕನಕ ಭವನ ಉದ್ಘಾಟನೆ ಹಾಗೂ ಅಂಬೇಡ್ಕರ್ ಭವನ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಹೆಣ್ಣು ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲೇ ಮದುವೆ ಮಾಡುವುದರಿಂದ ಅವರ ಆರೋಗ್ಯ ಮತ್ತು ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಮಕ್ಕಳನ್ನು ಕಷ್ಟಕ್ಕೆ ದೂಡದೆ ಅವರ ವ್ಯಾಸಂಗಕ್ಕೆ ಹೆಚ್ಚಿನ ಆದ್ಯತೆ ಕೊಡಿ. ಹೆಚ್ಚು ವಿದ್ಯಾವಂತರನ್ನಾಗಿ ಮಾಡಿ ಉತ್ತಮ ಭವಿಷ್ಯ ರೂಪಿಸಿ ಎಂದು ಸಚಿವರು ತಿಳಿಸಿದರು.

ಗುಂಡ್ಲುಪೇಟೆ ತಾಲ್ಲೂಕು ಚಿಕ್ಕಾಟಿಯಲ್ಲಿ ಕನಕ ಭವನವನ್ನು ಸಕ್ಕರೆ ಹಾಗೂ ಸಣ್ಣ ಕೈಗಾರಿಕೆ ಸಚಿವರಾದ ಡಾ.ಗೀತಾ ಮಹಾದೇವಪ್ರಸಾದ್ ಉದ್ಘಾಟಿಸಿದರು. ತಾಪಂ ಅಧ್ಯಕ್ಷ ನಟೇಶ್, ಬಿ.ಎಂ.ಮುನಿರಾಜು, ಎಂ.ಚಿನ್ನಸ್ವಾಮಿ ಇತರರು ಚಿತ್ರದಲ್ಲಿದ್ದಾರೆ.

ಕಾಡಾ ಅಧ್ಯಕ್ಷ ಎಚ್.ಎಸ್.ನಂಜಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ಮುನಿರಾಜು, ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷ ಎಂ.ಚಿನ್ನಸ್ವಾಮಿ, ಕೆಎಂಎಫ್ ನಿರ್ದೇಶಕ ಎಚ್.ಎಸ್.ನಂಜುಂಡಪ್ರಸಾದ್, ಮುಖಂಡರಾದ ಕೊಡಸೋಗೆ ಶಿವಬಸಪ್ಪ, ತಾಪಂ ಅಧ್ಯಕ್ಷ ಎಚ್.ಎನ್.ನಟೇಶ್, ಜಿಪಂ ಸದಸ್ಯರಾದ ಚೆನ್ನಪ್ಪ, ರತ್ನಮ್ಮ, ಚಾಮುಲ್ ನಿರ್ದೇಶಕ ಡಿ.ಮಾದಪ್ಪ, ತಾಪಂ ಸದಸ್ಯರಾದ ಸುಮಿತ್ರ, ಮಧು ಶೇಖರ್, ಗ್ರಾಪಂ ಉಪಾಧ್ಯಕ್ಷೆ ಶಿವಮ್ಮ, ಎಪಿಎಂಸಿ ಅಧ್ಯಕ್ಷ ಮಲ್ಲಣ್ಣ ಇತರರು ಉಪಸ್ಥಿತರಿದ್ದರು.

ರದ್ದಾಗಿದ್ದ ಪಡಿತರ ಚೀಟಿ ಸಕ್ರಿಯಗೊಳಿಸಿ ರೋಗಿಗೆ ಸಹಕರಿಸಿದ ಅಧಿಕಾರಿಗಳು

ಮೈಸೂರು,ಸೆ.೮–ನಗರದ ಅಪೋಲೋ ಬಿಜಿಎಸ್ ಆಸ್ಪತ್ರೆಯಲ್ಲಿ ಹೃದಯ ಸಂಬಂಧಿ ಚಿಕಿತ್ಸೆಗೆ ದಾಖಲಾಗಿರುವ ವ್ಯಕ್ತಿಯೊಬ್ಬರ ಪಡಿತರ ಚೀಟಿಯನ್ನು ಆನ್‌ಲೈನ್‌ನಲ್ಲಿ ಸಕ್ರಿಯಗೊಳಿಸುವ ಮೂಲಕ ಸರ್ಕಾರದ ಸವಲತ್ತು ಹೊಂದಲು ಆಹಾರ ಇಲಾಖೆ ಅಧಿಕಾರಿಗಳು ಅವಕಾಶ ಮಾಡಿಕೊಟ್ಟು ಕರ್ತವ್ಯ ನಿಷ್ಠೆ ಮೆರೆದಿದ್ದಾರೆ.

ನಗರದ ಸರಸ್ವತಿಪುರಂ ಬಡಾವಣೆಯಲ್ಲಿ ವಾಸವಾಗಿರುವ ಮೈಸೂರು ವಿವಿ ನಿವೃತ್ತ ನೌಕರ ಕೆ.ಸಿ.ಚಿನ್ನಸ್ವಾಮಿ(೮೨) ಈ ಸಹಕಾರ ಪಡೆದುಕೊಂಡವರು.

ಚಿನ್ನಸ್ವಾಮಿ ಅವರು ಪಡಿತರ ಚೀಟಿ ಹೊಂದಿದ್ದರೂ ಅದು ರದ್ದಾಗಿತ್ತು. ಈಗ ಅವರು ಅನಾರೋಗ್ಯದಿಂದ ಅಪೋಲೋ ಬಿಜಿಎಸ್ ಆಸ್ಪತೆಗೆ ದಾಖಲಾಗಿದ್ದಾರೆ. ಎಪಿಎಲ್ ಕಾರ್ಡ್‌ದಾರರಿಗೆ ಶೇ.೭೫ ರಿಯಾಯಿತಿ ಇದ್ದು, ಇವರ ಕಾರ್ಡ್ ರದ್ದಾಗಿದ್ದ ಕಾರಣ ಸರ್ಕಾರದ ಸವಲತ್ತು ಪಡೆಯಲು ಸಾಧ್ಯವಾಗಿರಲಿಲ್ಲ.

ಹಾಗಾಗಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಹಿರಿಯ ಉಪ ನಿರ್ದೇಶಕ ಡಾ.ಕಾ.ರಾಮೇಶ್ವರಪ್ಪ ಅವರನ್ನು ಚಿನ್ನಸ್ವಾಮಿ ಕಡೆಯವರು ಸಂಪರ್ಕಿಸಿ ವಿಷಯ ಮುಟ್ಟಿಸಿದ್ದಾರೆ.

ತಕ್ಷಣ ಕಾರ್ಯ ಪ್ರವೃತ್ತರಾದ ಉಪ ನಿರ್ದೇಶಕರು, ಅವರ ಹಳೆಯ ಪಡಿತರ ಚೀಟಿ ಪಡೆದು ಪರಿಶೀಲಿಸಿದಾಗ ಅದು ಆಧಾರ್ ಸಂಖ್ಯೆಗೆ ಲಿಂಕ್ ಆಗಿರಲಿಲ್ಲ. ಅದನ್ನು ಆಧಾರ್‌ಗೆ ಲಿಂಕ್ ಮಾಡುವ ಮೂಲಕ ಪಡಿತರ ಚೀಟಿಯನ್ನು ಮತ್ತೆ ಸಕ್ರಿಯಗೊಳಿಸಿ ಚಿನ್ನಸ್ವಾಮಿ ಅವರ ಚಿಕಿತ್ಸೆಗೆ ಸರ್ಕಾರದ ಸವಲತ್ತುಗಳನ್ನು ಪಡೆಯಲು ನೆರವಾಗಿದ್ದಾರೆ.

> ಪ್ರತಿಯೊಬ್ಬರೂ ಪಡಿತರ ಚೀಟಿ ಹೊಂದಿರುವುದು ಮುಖ್ಯ. ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಇದು ಅನುಕೂಲವಾಗಿದೆ. ಅದರಲ್ಲೂ ಎಪಿಎಲ್ ಪಡಿತರ ಚೀಟಿ ಹೊಂದುವುದು ಸುಲಭ; ಎಲ್ಲರೂ ಪಡೆದುಕೊಳ್ಳಿ.
>
> **–ಡಾ.ಕಾ.ರಾಮೇಶ್ವರಪ್ಪ, ಉಪ ನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ.**

ಸೆ.೧೨ರಂದು ಹಿರಿಯ ನಾಗರಿಕರ ಕ್ರೀಡಾಕೂಟ

ಚಾಮರಾಜನಗರ,ಸೆ.೮–ಜಿಲ್ಲಾಮಟ್ಟದಲ್ಲಿ ವಿಶ್ವ ಹಿರಿಯರ ದಿನಾಚರಣೆಯನ್ನು ವಿಶೇಷ ರೀತಿಯಲ್ಲಿ ಆಚರಿಸಲಾಗುತ್ತಿದ್ದು, ಈ ಸಂಬಂಧ ಸೆ.೧೨ರಂದು ನಗರದ ಪೇಟೆ ಶಾಲೆ ಆವರಣದಲ್ಲಿ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ೬೦ ವರ್ಷಕ್ಕೂ ಮೇಲ್ಪಟ್ಟ ಆಸಕ್ತ ಹಿರಿಯ ನಾಗರಿಕರು ಹೆಸರನ್ನು ಜಿಲ್ಲಾ ಅಂಗವಿಕಲರು ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳ ಕಚೇರಿ (೦೮೨೨೬–೨೨೩೬೮೮) ಅಥವಾ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದಲ್ಲಿ (೦೮೨೨೬–೨೨೨೦೩೦) ನೋಂದಾಯಿಸಿಕೊಳ್ಳುವಂತೆ ಕಚೇರಿ ಪ್ರಕಟಣೆ ತಿಳಿಸಿದೆ.

ಹದಗೆಟ್ಟ ರಸ್ತೆ, ಕೊಳಚೆ ನೀರು ಪೂರೈಕೆ ಆರೋಪ

ರಸ್ತೆ ಬಂದ್ ಮಾಡಿದ ಪ್ರತಿಭಟನಾಕಾರರ ಬಂಧನ

ಚಾಮರಾಜನಗರ,ಸೆ.೮–ನಗರದ ಭ್ರಮರಾಂಬ ಬಡಾವಣೆಗೆ ಕಲುಷಿತ ನೀರು ಸರಬರಾಜಾಗುತ್ತಿದೆ ಎಂದು ಆರೋಪಿಸಿ ಅಲ್ಲಿನ ನಿವಾಸಿಗಳು ಶುಕ್ರವಾರ ೧ ಗಂಟೆಗೂ ಹೆಚ್ಚು ಕಾಲ ರಸ್ತೆತಡೆ ನಡೆಸಿದರು.

ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿ (ಸೆಸ್ಕ್ ಕಚೇರಿ ಎದುರು) ಪ್ರತಿಭಟಿಸಿದ್ದರಿಂದ ವಾಹನ ಸಂಚಾರ ಸ್ಥಗಿತಗೊಂಡಿತ್ತು. ಈ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರನ್ನು ಪೊಲೀಸರು ಬಂಧಿಸಿ, ನಂತರ ಬಿಡುಗಡೆ ಮಾಡಿದರು.

ಭ್ರಮರಾಂಬ ಬಡಾವಣೆಯ ೪, ೫ ಮತ್ತು ೬ನೇ ತಿರುವುಗಳಲ್ಲಿರುವ ಮನೆಗಳಿಗೆ ಬಚ್ಚಲು ನೀರು ಮಿಶ್ರಿತ ನೀರು ಪೂರೈಕೆಯಾಗುತ್ತಿದೆ. ಪೈಪ್‌ಲೈನ್ ಒಡೆದು ಕಲುಷಿತ ನೀರು ಸರಬರಾಜಾಗುತ್ತಿದ್ದು, ಹತ್ತಾರು ಬಾರಿ ತಿಳಿಸಿದ್ದರೂ ನಗರಸಭೆ ಗಮನಹರಿಸಿಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾ ಸ್ಥಳಕ್ಕೆ ಸಂಬಂಧಿಸಿದವರು ಬಂದು ಅಹವಾಲನ್ನು ಆಲಿಸಲಿಲ್ಲ. ನಮ್ಮ ಪ್ರತಿಭಟನೆ ಹತ್ತಿಕ್ಕುವ ಸಲುವಾಗಿ ನಾಲ್ವರು ಮಹಿಳೆಯರು ಸೇರಿದಂತೆ ೧೭ ಜನರ ಮೇಲೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಹದಗೆಟ್ಟ ರಸ್ತೆ, ಅಶುಚಿತ್ವ ನೀರು ಪೂರೈಕೆ ಬಗ್ಗೆ ಕೂಡಲೇ ಕ್ರಮ ವಹಿಸದಿದ್ದರೆ ಹೋರಾಟ ತೀವ್ರಗೊಳಿಸುವುದಾಗಿ ಚುಡಾ ಮಾಜಿ ಅಧ್ಯಕ್ಷ ಬಾಲಸುಬ್ರಹ್ಮಣ್ಯ ಎಚ್ಚರಿಸಿದರು.

ಬಿಜೆಪಿ ಮಹಿಳಾ ಮೋರ್ಚಾ ಮಾಜಿ ಅಧ್ಯಕ್ಷೆ ಕಲ್ಯಾಣಿ, ಪಕ್ಷದ ಹಿಂದುಳಿದ ವರ್ಗಗಳ ಮೋರ್ಚಾ ನಗರ ಘಟಕದ ಅಧ್ಯಕ್ಷ ಮಣಿಕಂಠ, ನಮೋ ಬ್ರಿಗೇಡ್‌ನ ಪ್ರತಾಪ್, ಮುಖಂಡರಾದ ಆಲೂರು ಮಲ್ಲು, ಬಸವಣ್ಣ, ಶೇಷಪ್ರಸಾದ್, ಆನಂದ್, ವಿಜಯ ಮೊದಲಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಚಾ.ನಗರ ಭ್ರಮರಾಂಬ ಬಡಾವಣೆಗೆ ಕಲುಷಿತ ನೀರು ಸರಬರಾಜಾಗುತ್ತಿದೆ ಎಂದು ಆರೋಪಿಸಿ ಸ್ಥಳೀಯ ನಿವಾಸಿಗಳು ಶುಕ್ರವಾರ ರಸ್ತೆತಡೆ ನಡೆಸಿದರು.

ಮೊದಲನೇ ಪುಟದಿಂದ

ಕೃಷಿಗೆ ನೀರು; ರೈತರ ಹರ್ಷ

೧೮ ದಿನಗಳ ಅವಧಿಗೆ ಕಟ್ಟು ಪದ್ಧತಿ ನೀರು ಹರಿಸುವ ಸಭೆಯ ನಿರ್ಧಾರಕ್ಕೆ ಎಲ್ಲರೂ ಸಹಮತ ವ್ಯಕ್ತಪಡಿಸಿದರು ಎಂದು ಸಚಿವರು ವಿವರಿಸಿದರು.

ನಾಳೆಯಿಂದಲೇ ನಾಲೆಗೆ ನೀರು: ಮೊದಲ ಹಂತದಲ್ಲಿ ಸೆ.೧೦ರಿಂದ ೨೮ರವರೆಗೆ ನಾಲೆಯಲ್ಲಿ ನೀರು ಹರಿಸಲಾಗುವುದು. ನಂತರ ೧೦ ದಿನದವರೆಗೆ ನೀರು ಹರಿಸುವುದನ್ನು ನಿಲ್ಲಿಸಲಾಗುವುದು. ಮತ್ತೆ ಕಟ್ಟು ಪದ್ಧತಿಯಂತೆ ಕೆಆರ್‌ಎಸ್ ಹಾಗೂ ಹೇಮಾವತಿ ನಾಲೆಗಳಿಗೆ ನೀರು ಹರಿಸುವುದು ಮುಂದುವರಿಯಲಿದೆ ಎಂದು ತಿಳಿಸಿದರು.

ಹೇಮಾವತಿಯಿಂದಲೂ ನೀರು: ಕೆಆರ್‌ಎಸ್ ವಿಭಾಗದಲ್ಲಿ ವಿಶ್ವೇಶ್ವರಯ್ಯ, ವರುಣಾ, ವಿರಿಜಾ, ಚಿಕ್ಕದೇವರಾಯ, ಆರ್‌ಬಿಎಲ್‌ಎಲ್, ರಾಜಪರಮೇಶ್ವರಿ ನಾಲೆಗಳಿವೆ. ಈ ನಾಲೆಗಳಲ್ಲಿ ಹರಿಸಿದ ನೀರು ಕೃ.ರಾ.ಪೇಟೆ ಹಾಗೂ ನಾಗಮಂಗಲ, ಮಂಡ್ಯ ತಾಲ್ಲೂಕಿನ ದುದ್ದ, ಬಸರಾಳು ಹೋಬಳಿಗಳಿಗೆ ತಲುಪುವುದಿಲ್ಲ. ಹಾಗಾಗಿ ಹಾಸನ ಜಿಲ್ಲೆಯ ಗೊರೂರಿನಲ್ಲಿರುವ ಹೇಮಾವತಿ ಜಲಾಶಯದಿಂದ ಹೇಮಾವತಿ ನಾಲೆಗಳಿಗೆ ನೀರು ಹರಿಸಲಾಗುವುದು. ಆ ಮೂಲಕ ಕೃ.ರಾ.ಪೇಟೆ, ನಾಗಮಂಗಲ ತಾಲ್ಲೂಕು ಮತ್ತು ಮಂಡ್ಯ ತಾಲ್ಲೂಕಿನ ದುದ್ದ, ಬಸರಾಳು ಹೋಬಳಿಗಳ ಕೃಷಿ ಕ್ಷೇತ್ರಕ್ಕೆ ನೀರು ತಲುಪುವಂತೆ ಮಾಡಲಾಗುವುದು ಎಂದು ನೀರಾವರಿ ಇಲಾಖೆ ಮೂಲಗಳು ಪತ್ರಿಕೆಗೆ ತಿಳಿಸಿವೆ.

ಸಚಿವರ ಮನವಿ: ಜಿಲ್ಲೆಯ ಎಲ್ಲಾ ಕೆರೆಗಳನ್ನು ಪೂರ್ಣ ತುಂಬಿಸಲಾಗುವುದು. ಆದರೆ, ಭತ್ತ, ಕಬ್ಬು ಬಿತ್ತನೆಗೆ ಈಗಾಗಲೇ ಅವಧಿ ಮೀರಿಹೋಗಿದೆ. ಹಾಗಾಗಿ, ರಾಗಿ, ಜೋಳ, ಹುರುಳಿ ಸೇರಿದಂತೆ ಅಲ್ಪಾವಧಿ ಬೆಳೆಗಳನ್ನು ಬೆಳೆಯಬಹುದಾಗಿದೆ. ಜಿಲ್ಲೆಯ ರೈತರು ಅರೆಖುಷ್ಕಿ ಬೆಳೆಗಳನ್ನು ಮಾತ್ರ ಬೆಳೆಯಬೇಕು ಎಂದು ಸಚಿವರು ಮನವಿ ಮಾಡಿದರು.

ಶಾಸಕರಾದ ಎನ್.ಚಲುವರಾಯಸ್ವಾಮಿ, ಕೆ.ಎಸ್.ಪುಟ್ಟಣ್ಣಯ್ಯ, ರಮೇಶ್ ಬಂಡಿಸಿದ್ದೇಗೌಡ, ಡಿ.ಸಿ.ತಮ್ಮಣ್ಣ, ಜಿಲ್ಲಾಧಿಕಾರಿ ಎನ್.ಮಂಜುಶ್ರೀ, ಕೆಆರ್‌ಎಸ್ ಹಾಗೂ ಹೇಮಾವತಿ ನೀರಾವರಿ ನಿಗಮದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ವಿವಿಧ ಸಂಘಟನೆಗಳಿಂದ ಒತ್ತಾಯ: ರೈತ ಸಂಘ ಹಾಗೂ ವಿವಿಧ ಸಂಘಟನೆಗಳು ಒಂದು ತಿಂಗಳ ಕಾಲ ಜಿಲ್ಲೆಯಲ್ಲಿರುವ ಕೆರೆಕಟ್ಟೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದರು. ಅದರಂತೆ ಆ.೧೦ರಿಂದ ಜಲಾಶಯದಿಂದ ನೀರು ಹರಿಸಲಾಗಿತ್ತು. ಇದರಿಂದ ಬಹುತೇಕ ಕೆರೆಗಳು ಭರ್ತಿಯಾಗಿದ್ದವು.

ನಂತರ ಕಟ್ಟು ಪದ್ಧತಿಯಲ್ಲಿ ಬೆಳೆಗಳಿಗೆ ನೀರು ಹರಿಸಬೇಕು ಎಂದು ರೈತರು ಒತ್ತಾಯಿಸುತ್ತಲೇ ಇದ್ದರು. ಅಲ್ಲದೆ, ಕಾವೇರಿ ಅಚ್ಚುಕಟ್ಟು ಪ್ರದೇಶದಲ್ಲಿ ಉತ್ತಮ ಮಳೆಯಾದ ಹಿನ್ನೆಲೆಯಲ್ಲಿ ಕನ್ನಂಬಾಡಿ ಕಟ್ಟೆಯಲ್ಲಿನ ನೀರಿನ ಸಂಗ್ರಹ ಪ್ರಮಾಣದಲ್ಲಿ ಹೆಚ್ಚಾಗಿತ್ತು. ಸದ್ಯ ಕೆಆರ್‌ಎಸ್ ಜಲಾಶಯದಲ್ಲಿನ ನೀರಿನ ಮಟ್ಟ ೧೦೨ ಅಡಿಗೆ ತಲುಪಿದೆ.

೯೫ ಸಾವಿರ ಹೆಕ್ಟೇರ್: ಮಂಡ್ಯ ಜಿಲ್ಲೆಯಲ್ಲಿ ೭ ಲಕ್ಷ ಹೆಕ್ಟೇರ್ ನೀರಾವರಿ ಪ್ರದೇಶವಿದ್ದು, ಕಬ್ಬು, ಭತ್ತ ಹೆಚ್ಚಾಗಿ ಬೆಳೆಯಲಾಗುತ್ತಿದೆ. ಕಳೆದ ಮೂರು ವರ್ಷಗಳಿಂದ ಉತ್ತಮ ಮಳೆಯಾಗದ ಹಿನ್ನೆಲೆಯಲ್ಲಿ ಕೃಷಿ ಪ್ರದೇಶದ ಚಟುವಟಿಕೆಯೇ ತೀವ್ರ ಕುಸಿತ ಕಂಡಿತ್ತು. ಈ ಬಾರಿಯ ಮುಂಗಾರು ಹಂಗಾಮಿನಲ್ಲಿ ಒಟ್ಟು ೨.೫೯ ಲಕ್ಷ ಹೆಕ್ಟೇರ್ ಪ್ರದೇಶದ ಬಿತ್ತನೆ ಗುರಿ ಹೊಂದಲಾಗಿತ್ತು. ಆದರೆ ಅದೂ ಸಾಧ್ಯವಾಗಿಲ್ಲ. ಸದ್ಯ ಕೇವಲ ೯೫ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ.

ಭತ್ತ, ಕಬ್ಬು ಬಿತ್ತನೆ ಕುಸಿತ: ಜಿಲ್ಲೆಯಲ್ಲಿ ಶೇ.೭೫ರಷ್ಟು ಭತ್ತ, ಕಬ್ಬು ಬೆಳೆ ಕುಸಿತವಾಗಿದೆ. ಕೇವಲ ಕೊಳವೆ ಬಾವಿ ಹಾಗೂ ತಗ್ಗು ಪ್ರದೇಶದ ಜಮೀನಿನ ರೈತರು ಭತ್ತ, ಕಬ್ಬಿನ ಬೆಳೆ ಹಾಕಿದ್ದಾರೆ.

ಸುಳಿವು ಕೊಟ್ಟರೆ ೧೦ ಲಕ್ಷ ರೂ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ರಾಮಲಿಂಗಾರೆಡ್ಡಿ ಅವರು, ಗೌರಿ ಲಂಕೇಶ್ ಹತ್ಯೆ ನಂತರ ನಡೆದಿರುವ ಘಟನೆಗಳು ಹಾಗೂ ತನಿಖೆ ಕುರಿತಂತೆ ಮುಖ್ಯಮಂತ್ರಿಗಳಿಗೆ ಪೂರ್ಣ ಮಾಹಿತಿ ನೀಡಿದ್ದೇನೆ. ಆದಷ್ಟೂ ಬೇಗ ಹಂತಕರನ್ನು ಪತ್ತೆ ಹಚ್ಚಿ ಬಂಧಿಸುವಂತೆ ಎಸ್‌ಐಟಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಹಿರಿಯ ಪೊಲೀಸ್ ಅಧಿಕಾರಿ ಬಿ.ಕೆ.ಸಿಂಗ್ ನೇತೃತ್ವದಲ್ಲಿ ಎಸ್‌ಐಟಿ ರಚಿಸಲಾಗಿದ್ದು, ಅವರು ಎಷ್ಟು ಅಧಿಕಾರಿಗಳನ್ನು ಕೇಳಿದರೂ ಒದಗಿಸುವಂತೆ ಡಿಜಿಪಿ ಆರ್.ಕೆ.ದತ್ತ ಅವರಿಗೆ ಸೂಚಿಸಲಾಗಿದೆ. ಹೆಚ್ಚುವರಿಯಾಗಿ ಯಾವುದೇ ಸೌಲಭ್ಯ ಕೇಳಿದರೂ ಅನುಮತಿ ನೀಡಲು ಸರ್ಕಾರ ಸಿದ್ಧವಿದೆ. ನಮಗೆ ಹಂತಕರು ಯಾರೆಂಬುದು ಆದಷ್ಟೂ ಬೇಗ ಗೊತ್ತಾಗಬೇಕಿದೆ ಎಂದರು.

ಈಗಾಗಲೇ ಎಸ್‌ಐಟಿ ಅಧಿಕಾರಿಗಳು ವಿವಿಧ ಆಯಾಮಗಳಲ್ಲಿ ತನಿಖೆ ಆರಂಭಿಸಿದ್ದಾರೆ. ಗೌರಿ ಲಂಕೇಶ್ ಕುಟುಂಬದ ಸದಸ್ಯರು, ಆಪ್ತರಿಂದಲೂ ಮಾಹಿತಿ ಪಡೆದಿದ್ದಾರೆ. ಗೌರಿ ಅವರ ಮನೆ ಬಳಿಯ ಸಿಸಿಟಿವಿ ಕ್ಯಾಮೆರಾ ಸೇರಿದಂತೆ ಆ ಪ್ರದೇಶದ ಹತ್ತಾರು ಕ್ಯಾಮೆರಾಗಳಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ಪರಿಶೀಲಿಸಿದ್ದಾರೆ. ಹತ್ಯೆಗೆ ಯಾವ ಅಂಶ ಕಾರಣವಾಗಿರಬಹುದು ಎಂಬ ಆಲೋಚನೆಯಲ್ಲಿ ಎಲ್ಲ ಆಯಾಮಗಳಿಂದಲೂ ತನಿಖೆ ನಡೆಸುತ್ತಿದ್ದಾರೆ. ಸದ್ಯಕ್ಕೆ ಹೆಚ್ಚಿನ ವಿವರ ನೀಡಲು ಸಾಧ್ಯವಿಲ್ಲ ಎಂದು ಸಚಿವರು ಸುದ್ದಿಗಾರರಿಗೆ ಹೇಳಿದರು.

ಸಚಿವ ವಿನಯ್ ಕುಲಕರ್ಣಿ ಅವರಿಗೆ ಜೀವ ಬೆದರಿಕೆ ಕರೆ ಬಂದಿರುವುದರಿಂದ ಅವರಿಗೆ ವಿಶೇಷ ಭದ್ರತೆ ಒದಗಿಸಲಾಗಿದೆ. ಜೀವ ಬೆದರಿಕೆ ಇರುವವರಿಗೆ ಸೂಕ್ತ ರಕ್ಷಣೆ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಕೆಲವು ಪ್ರಗತಿಪರ ಚಿಂತಕರಿಗೆ ಅನಾಮಧೇಯ ವ್ಯಕ್ತಿಗಳು ಕೊಲೆ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದಾರೆ. ಅಂತಹವರಿಗೆ ಸೂಕ್ತ ರಕ್ಷಣೆ ನೀಡಬೇಕೆಂದು ಪೊಲೀಸರಿಗೆ ನಿರ್ದೇಶಿಸಲಾಗಿದೆ. ವಿಚಾರವಾದಿಗಳಾಗಿರಲಿ ಅಥವಾ ಯಾರೇ ಆಗಿರಲಿ ಪ್ರಾಣ ಬೆದರಿಕೆ ಇರುವವರಿಗೆ ಸೂಕ್ತ ಭದ್ರತೆ ಒದಗಿಸುವುದು ಸರ್ಕಾರದ ಆದ್ಯ ಕರ್ತವ್ಯ ಎಂದು ಹೇಳಿದರು.

ಲಿಂಗಾಯತ ಹೋರಾಟ: ಹಲವರಿಗೆ ಭದ್ರತೆ

ಲಿಂಗಾಯತ ಸ್ವತಂತ್ರ ಧರ್ಮ ಘೋಷಣೆಗಾಗಿ ನಡೆದಿರುವ ಹೋರಾಟದಲ್ಲಿ ಮುಂಚೂಣಿಯಲ್ಲಿರುವ ಜಾ.ದಳದ ಹಿರಿಯ ಮುಖಂಡ ಬಸವರಾಜ ಹೊರಟ್ಟಿ, ಸಚಿವ ಎಂ.ಬಿ.ಪಾಟೀಲ್, ನಿವೃತ್ತ ಐಎಎಸ್ ಅಧಿಕಾರಿ ಜಾಮ್‌ದಾರ್ ಅವರಿಗೆ ಬೆದರಿಕೆ ಕರೆಗಳು ಬಂದಿದ್ದು, ವಿಶೇಷ ಭದ್ರತೆ ಒದಗಿಸಲು ರಾಜ್ಯ ಗೃಹ ಸಚಿವಾಲಯ ನಿರ್ಧರಿಸಿದೆ.

‘ಉಡುಪಿ ಚಲೋ’ ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಭಾಸ್ಕರ್ ಪ್ರಸಾದ್ ಎಂಬವರಿಗೂ ‘೩ ದಿನಗಳಲ್ಲಿ ಮುಗಿಸುವೆ’ ಎಂಬ ಬೆದರಿಕೆ ಕರೆ ಬಂದಿದ್ದು, ಅವರು ಹಿರಿಯ ಪೊಲೀಸ್ ಅಧಿಕಾರಿಗಳಿಗೆ ದೂರು ನೀಡಿದ್ದಾರೆ. ಅವರಿಗೂ ಪೊಲೀಸ್ ಭದ್ರತೆ ಒದಗಿಸಲಾಗಿದೆ. ಕೋಮು ಸೌಹಾರ್ದ ವೇದಿಕೆ ಅಧ್ಯಕ್ಷ ಕೆ.ಎಲ್.ಅಶೋಕ್, ಮುಖ್ಯಮಂತ್ರಿಗಳ ಪತ್ರಿಕಾ ಕಾರ್ಯದರ್ಶಿ ದಿನೇಶ್ ಅಮೀನ್ ಮಟ್ಟು, ಸಾಹಿತಿಗಳಾದ ಎಸ್.ಕೆ.ಭಗವಾನ್, ಚಂದ್ರಶೇಖರ್ ಪಾಟೀಲ್, ಯೋಗೀಶ್ ಮಾಸ್ಟರ್ ಸೇರಿದಂತೆ ಹಲವರಿಗೂ ಜೀವ ಬೆದರಿಕೆಯಿದ್ದು, ಎಲ್ಲರಿಗೂ ಪೊಲೀಸ್ ಭದ್ರತೆ ಒದಗಿಸಲು ಗೃಹ ಇಲಾಖೆ ತೀರ್ಮಾನಿಸಿದೆ.

ಎಸ್.ಕೆ.ಭಗವಾನ್, ಚಂಪಾ ಅವರು ಸದ್ಯ ಪೊಲೀಸ್ ರಕ್ಷಣೆಯಲ್ಲೇ ಇದ್ದಾರೆ. ಈಗ ಬೆದರಿಕೆ ಕರೆ ಹೆಚ್ಚಿರುವುದರಿಂದ ಹೆಚ್ಚಿನ ಭದ್ರತೆ ಒದಗಿಸುವ ಬಗ್ಗೆ ಗೃಹ ಸಚಿವಾಲಯ ಚಿಂತನೆ ನಡೆಸಿದೆ. ಗೌರಿ ಲಂಕೇಶ್ ಹತ್ಯೆ ಹಿನ್ನೆಲೆಯಲ್ಲಿ ಪ್ರಗತಿಪರರು, ಚಿಂತಕರು, ವಿಚಾರವಾದಿಗಳಿಗೆ ವಿಶೇಷ ಭದ್ರತೆ ಕಲ್ಪಿಸಲು ಸರ್ಕಾರ ಮುಂದಾಗಿದೆ.

ತನಿಖೆಗೆ ಕಾಲಮಿತಿ?

ಈ ಮಧ್ಯೆ ಮಂಡ್ಯದಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಗೌರಿ ಲಂಕೇಶ್ ಅವರ ಹತ್ಯೆ ಪ್ರಕರಣದಲ್ಲಿ ತನಿಖೆ ಆರಂಭಗೊಂಡಿದೆ. ವಿಶೇಷ ತನಿಖಾ ತಂಡಕ್ಕೆ ೨ ವಾರಗಳ ಕಾಲಮಿತಿ ನಿಗದಿಪಡಿಸಲಾಗಿದೆ. ಆದರೆ ತನಿಖೆ ಇಂತಿಷ್ಟೇ ದಿನಕ್ಕೆ ಪೂರ್ಣಗೊಳ್ಳುತ್ತದೆ ಎಂದು ಹೇಳಲು ಬರುವುದಿಲ್ಲ. ಈ ಬಗ್ಗೆ ಈಗಾಗಲೇ ಗೌರಿ ಲಂಕೇಶ್ ಅವರ ಕುಟುಂಬದವರ ಜೊತೆ ಮಾತುಕತೆ ನಡೆಸಲಾಗಿದೆ ಎಂದು ತಿಳಿಸಿದರು.